ಕುಂದಾಪುರದಿಂದ ಮಂತ್ರಾಲಯ ಮತ್ತು ತಿರುಪತಿಗೆ ಬಸ್ಸಿನ ವ್ಯವಸ್ಥೆ

2011 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರದಿಂದ ತಿರುಪತಿ ಮತ್ತು ಮಂತ್ರಾಲಯಕ್ಕೆ ಕೆ.ಎಸ್.ಆರ್.ಟಿ.ಸಿ ಬಸ್ಸಿನ ವ್ಯವಸ್ಥೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಮನವಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು) :

ಅ) ಕುಂದಾಪುರದಿಂದ ತಿರುಪತಿಗೆ ಸಾರಿಗೆ ಸೌಲಭ್ಯ ಕಲ್ಪಿಸಲು ಮನವಿ ಬಂದಿರುತ್ತದೆ. ಆದರೆ ಕುಂದಾಪುರದಿಂದ ಮಂತ್ರಾಲಯಕ್ಕೆ ಸಾರಿಗೆ ಸೌಲಭ್ಯ ಕಲ್ಪಿಸಲು ಮನವಿ ಬಂದಿರುವುದಿಲ್ಲ.

ಆ) ಪ್ರಸ್ತಾಪಿಸಿರುವ ಮಾರ್ಗಗಳು ಅಂತರರಾಜ್ಯ ಮಾರ್ಗಗಳಾಗಿರುತ್ತವೆ. ಈ ವಿಷಯವನ್ನು ಆಂಧ್ರಪ್ರದೇಶದೊಂದಿಗಿನ ಮುಂದಿನ ಅಂತರ ರಾಜ್ಯ ಸಾರಿಗೆ ಒಪ್ಪಂದದಲ್ಲಿ ಸೇರಿಸಲು ಪರಿಶೀಲಿಸಲಾಗುವುದು.

ಲಾಭ ಬರುವ ಕೆ.ಎಸ್.ಆರ್.ಟಿ.ಸಿ. ಡಿಪೋಗಳು

2012 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ ಮಾಡುವ ಯೋಜನೆ ಯಾವ ಹಂತದಲ್ಲಿದೆ ಹಾಗೂ ಇದನ್ನು ಎಂದು ಪ್ರಾರಂಭಿಸಲಾಗುವುದು ಮತ್ತು ಎಂದು ಪೂರ್ಣಗೊಳಿಸಲಾಗುವುದು.

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು) :

ಅ) ಕುಂದಾಪುರವು ರಾಷ್ಟ್ರೀಕೃತವಲ್ಲದ ವಲಯದಲ್ಲಿರುತ್ತದೆ. ಸಧ್ಯಕ್ಕೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಆರ್ಥಿಕ ಮುಗ್ಗಟ್ಟನ್ನು ಎದುರಿಸುತ್ತಿದೆ. ಆರ್ಥಿಕ ಪರಿಸ್ಥಿತಿಯು ಸುಧಾರಿಸಿದ ನಂತರ ಈ ವಿಷಯವನ್ನು ಪರಿಶೀಲಸಲಾಗುವುದು.

ನೆಲಮಂಗಲದ ಮೆಗಾಮಾರ್ಕೆಟ್ ಕುರಿತು

2014 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲದ ಬಳಿ ಮೆಗಾ ಮಾರ್ಕೆಟನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ ಇದಕ್ಕಾಗಿ ಎಷ್ಟು ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ?